ಕರ್ನಾಟಕ ಸರ್ಕಾರ

ಏಪ್ರಿಲ್ 18, 2017

**ರಾಜ್ಯ ವಿಧಾನ ಪರಿಷತ್‌ನ ಮಾಜಿ ಉಪ ಸಭಾಪತಿ**
**ವಿಮಲಾ ಗೌಡ ಅವರ ನಿಧನಕ್ಕೆ ಮುಖ್ಯಮಂತ್ರಿ ಸಂತಾಪ**

**ಬೆಂಗಳೂರು, ಏಪ್ರಿಲ್ 18:**

ರಾಜ್ಯ ವಿಧಾನ ಪರಿಷತ್‌ನ ಸದಸ್ಯರೂ ಆಗಿದ್ದ ಮಾಜಿ ಉಪ ಸಭಾಪತಿ ವಿಮಲಾ ಗೌಡ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ಮಹಾ ನಗರ ಪಾಲಿಕೆಯ ಸದಸ್ಯರಾಗಿ ಸಾರ್ವತ್ರಿಕ ಜೀವನಕ್ಕೆ ಪಾದಾರ್ಪಣೆ ಮಾಡಿದ ವಿಮಲಾ ಗೌಡ ಅವರು ತಮ್ಮ ಪ್ರತಿಭೆ ಹಾಗೂ ಸ್ವ-ಸಾಮರ್ಥ್ಯದಿಂದ ರಾಜ್ಯ ವಿಧಾನ ಪರಿಷತ್ ಪ್ರವೇಶಿಸಿ, ಮೇಲ್ಮನೆಯಲ್ಲಿ ಮಹಿಳಾ ಪರ ನಿಲುವುಗಳ ಗಟ್ಟಿ ಧ್ವನಿಯಾಗಿದ್ದರು. ರಾಜ್ಯ ವಿಧಾನ ಪರಿಷತ್‌ನ ಉಪ ಸಭಾಪತಿ ಸ್ಥಾನವನ್ನು ಅಲಂಕರಿಸಿದ್ದು ಮಾತ್ರವಲ್ಲದೆ, ಅದನ್ನು ಸಮರ್ಥವಾಗಿ ನಿಭಾಯಿಸಿ ಆ ಸ್ಥಾನಕ್ಕೆ ಶೋಭೆ ತಂದು ಕೊಟ್ಟಿದ್ದರು ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ವಿಮಲಾ ಗೌಡ ಅವರ ಆತ್ಮಕ್ಕೆ ಶಾಂತಿ ಲಭಿಸಲಿ. ವಿಮಲಾ ಗೌಡ ಅವರ ಅಗಲಿಕೆಯಿಂದ ಉಂಟಾದ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗ ಹಾಗೂ ಅಪಾರ ಅಭಿಮಾನಿ ವರ್ಗಕ್ಕೆ ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ

*******

.ಡಿ ಪಿ ಎಂ